ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 237 (1702)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ರಾಜ್ಯದಲ್ಲಿ ಕೋವಿಡ್-19 ಕಾರಣದಿಂದಾಗಿ ಅಂಗನವಾಡಿ ಮಕ್ಕಳಲ್ಲಿ ಅಪೌಷ್ಠಿಕತೆ

(ಅ) ರಾಜ್ಯದಲ್ಲಿ ಕೋವಿಡ್-19 ಕಾರಣದಿಂದಾಗಿ ಅಂಗನವಾಡಿ ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಅಪೌಷ್ಠಿಕತೆಗೆ ಒಳಗಾಗಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ಕಾರ ಅಪೌಷ್ಠಿಕತೆ ನಿವಾರಣೆ ಮತ್ತು ಮಕ್ಕಳ ವಿವಿಧ ಆರೋಗ್ಯ ಸಮಸ್ಯೆಗಳ ನಿವಾರಿಸಲು ಸರ್ಕಾರ ಮೀಸಲ್ಲಿಟ್ಟಿರುವ ಅನುದಾನ ಎಷ್ಟು;

(ಈ) 2018-2019 ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಅಂಗನವಾಡಿ ಕೇಂದ್ರದಲ್ಲಿ ದಾಖಲಾತಿ ಪಡೆದ ಮಕ್ಕಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)